10) ಪ್ರಕಟಣೆ

ಅಧ್ಯಕ್ಷರು : ವಿಧಾನಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನಪರಿಷತ್ ದಿನಾಂಕ: 16-1-2004ರಂದು ಕರ್ನಾಟಕ ಮಾರಾಟ ತೆರಿಗೆ ಮತ್ತು ಇತರೆ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕ 2004ನ್ನು ಯಾವುದೇ ತಿದ್ದುಪಡಿಗಳಿಲ್ಲದೆ ವಿಧಾನಪರಿಷತ್ತಿನಲ್ಲಿ ಅಂಗೀಕರಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.

11) ರಾಜ್ಯಪಾಲರ ಭಾಷಣಕ್ಕೆ ಸಲ್ಲಿಸತಕ್ಕ ವಂದನಾ ನಿರ್ಣಯದ ಪ್ರಸ್ತಾವ

ಅಧ್ಯಕ್ಷರು : "2004ರ ಜನವರಿ 5 ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸುತ್ತೇವೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಅಧ್ಯಕ್ಷರು : ಈಗ ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತಿದ್ದೇನೆ.

(ಸದನವು ರಾತ್ರಿ 9 ಗಂಟೆ 27 ನಿಮಿಷಕ್ಕೆ ಅನಿರ್ದಿಷ್ಟ ಅವಧಿಯವರೆಗೆ ಮುಂದೂಡಲ್ಪಟ್ಟಿತು)

---

† ಈ ಚಿಹ್ನೆ ಮಾನ್ಯ ಸದಸ್ಯರ ಭಾಷಣವನ್ನು ಅಥವಾ ಟಿಪ್ಪಣಿಯನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತಾರೆ.